# ಸುತ್ತೋಲೆ

## ಕರ್ನಾಟಕದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇಮಕಾತಿ – ಸ್ಪರ್ಧಾತ್ಮಕ ಪರೀಕ್ಷೆ–2021 ರ ವೇಳಾಪಟ್ಟಿ ಮತ್ತು ಬೆಲ್ ಸಮಯಗಳನ್ನು ಈ ಕೆಳಗೆ ನೀಡಲಾಗಿದೆ – ಐಚ್ಛಿಕ ವಿಷಯಗಳು: ಪ್ರತಿ ಪತ್ರಿಕೆಗೆ – 250 ಅಂಕಗಳು

| ದಿನಾಂಕ / ದಿನ | ಸಮಯ / ಅವಧಿ | ವಿಷಯ/ಗಳು – MCQ - OMR | | | | |
|---|---|---|---|---|---|---|
| 14–03–2022<br>ಸೋಮವಾರ | ಬೆ. 9.00 ರಿಂದ ಮ. 12.00 (3 HOURS) | 1. ಕನ್ನಡ | 4. ಉರ್ದು | 22. ಸಸ್ಯ ಶಾಸ್ತ್ರ | 12. ಭೂಗೋಳ ಶಾಸ್ತ್ರ | 26. ಫ್ಯಾಷನ್ ಟೆಕ್ನಾಲಜಿ |
| | ಮ. 2.00 ರಿಂದ ಸಂ. 5.00 (3 HOURS) | 7. ರಾಜ್ಯಶಾಸ್ತ್ರ | 20. ಸೂಕ್ಷ್ಮ ಜೀವಶಾಸ್ತ್ರ | 13. ಭೂಗರ್ಭ ಶಾಸ್ತ್ರ | | |
| 15–03–2022<br>ಮಂಗಳವಾರ | ಬೆ. 9.00 ರಿಂದ ಮ. 12.00 (3 HOURS) | 5. ಇತಿಹಾಸ | 14. ವಾಣಿಜ್ಯ ಶಾಸ್ತ್ರ | 19. ಗಣಿತ ಶಾಸ್ತ್ರ | 21. ಪ್ರಾಣಿಶಾಸ್ತ್ರ | |
| | ಮ. 2.00 ರಿಂದ ಸಂ. 5.00 (3 HOURS) | 6. ಅರ್ಥಶಾಸ್ತ್ರ | 16. ಭೌತಶಾಸ್ತ್ರ | 17. ರಸಾಯನ ಶಾಸ್ತ್ರ | 2. English | 11. ಸಮಾಜ ಕಾರ್ಯ |
| 16–03–2022<br>ಬುಧವಾರ | ಬೆ. 9.00 ರಿಂದ ಮ. 12.00 (3 HOURS) | 9. ಶಿಕ್ಷಣ ಶಾಸ್ತ್ರ | 3. ಹಿಂದಿ | 24. ಗಣಕ ವಿಜ್ಞಾನ | 10. ಕಾನೂನು | 25. ಸಂಖ್ಯಾ ಶಾಸ್ತ್ರ |
| | ಮ. 2.00 ರಿಂದ ಸಂ. 5.00 (3 HOURS) | 15. ನಿರ್ವಹಣಾ ಶಾಸ್ತ್ರ | 18. ಜೈವಿಕ ರಸಾಯನ ಶಾಸ್ತ್ರ | 23. ಎಲೆಕ್ಟ್ರಾನಿಕ್ಸ್ | 8. ಸಮಾಜ ಶಾಸ್ತ್ರ | |

## ಸ್ಪರ್ಧಾತ್ಮಕ ಪರೀಕ್ಷೆಯ ಬೆಲ್ ಸಮಯ ಮತ್ತು ವಿವರಗಳು

ಈ ಬೆಲ್ ಸಮಯವನ್ನು ಯಾವುದೇ ಬದಲಾವಣೆ ಮಾಡದೆ ಅಥವಾ ದೂರು ಬರದಂತೆ ನಿಖರವಾಗಿ ಅನುಸರಿಸಲು ಸೂಚಿಸಿದೆ.

| ಕ್ರ ಸಂ | ಬೆಲ್ ಸಂಖ್ಯೆ | ಬೆಳಗಿನ ಅವಧಿ | ಮಧ್ಯಾಹ್ನದ ಅವಧಿ | ವಿವರಗಳು |
|---|---|---|---|---|
| 01 | ಮೊದಲನೇ ಬೆಲ್ | ಬೆ. 8.30 | ಮ. 1.30 | • ಪ್ರವೇಶ ಪತ್ರವನ್ನು ಮತ್ತು ಗುರುತಿನ ಚೀಟಿಯನ್ನು ತೋರಿಸಿದರೆ ಅಭ್ಯರ್ಥಿಗಳಿಗೆ ಪರೀಕ್ಷೆಯ ಕೊಠಡಿಯನ್ನು ಪ್ರವೇಶಿಸಿ ನಿಗದಿತ ಆಸನದಲ್ಲಿ ಕುಳಿತುಕೊಳ್ಳಲು ಅವಕಾಶ ಕಲ್ಪಿಸಲಾಗುವುದು.<br>• ಕೊಠಡಿ ಮೇಲ್ವಿಚಾರಕರು ಪ್ರವೇಶ ಪತ್ರದಲ್ಲಿರುವ ಭಾವಚಿತ್ರವನ್ನು ಮತ್ತು ಗುರುತಿನ ಚೀಟಿಯಲ್ಲಿ ಮುದ್ರಿತವಾಗಿರುವ ಭಾವಚಿತ್ರವನ್ನು ನಾಮಿನಲ್ ರೋಲ್‌ನಲ್ಲಿ ಮುದ್ರಿತವಾಗಿರುವ ಭಾವಚಿತ್ರದೊಂದಿಗೆ ಮತ್ತು ಪರೀಕ್ಷೆಗೆ ಹಾಜರಾಗಿರುವ ಅಭ್ಯರ್ಥಿಯೊಂದಿಗೆ ಪರಿಶೀಲಿಸುತ್ತಾರೆ.<br>• ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಗೆ ಓ.ಎಂ.ಆರ್. ಉತ್ತರ ಪತ್ರಿಕೆಯನ್ನು ವಿತರಿಸುತ್ತಾರೆ. ಅಭ್ಯರ್ಥಿಗಳು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ತಮ್ಮ ಹೆಸರನ್ನು ಬರೆಯಬೇಕು.<br>• ನಂತರ ಅಭ್ಯರ್ಥಿಗಳು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಎಚ್ಚರದಿಂದ ನೊಂದಣಿ ಸಂಖ್ಯೆ, ಕೇಂದ್ರ ಸಂಖ್ಯೆ, ವಿಷಯ – ಸಂಕೇತಗಳನ್ನು ಬರೆದು ಸಂಬಂಧಿಸಿದ ವೃತ್ತಗಳನ್ನು ತಪ್ಪದೇ ತುಂಬಬೇಕು. (ಮತ್ತೊಮ್ಮೆ ಪರಿಶೀಲಿಸುವುದು ಸೂಕ್ತ.) |
| 02 | ಎರಡನೇ ಬೆಲ್ | ಬೆ. 8.45 | ಮ.1.45 | • ಉಪ ಮುಖ್ಯ ಪರೀಕ್ಷಾ ಅಧೀಕ್ಷಕರು / ಪ್ರಶ್ನೆ ಪತ್ರಿಕಾ ಪಾಲಕರು ಸೀಲ್ ಮಾಡಿರುವ ಉತ್ತರ ಪತ್ರಿಕೆ ಸಮೇತ ಇರುವ ಪ್ರಶ್ನೆ ಪತ್ರಿಕಾ ಲಕೋಟೆಗಳನ್ನು ಕೊಠಡಿ ಮೇಲ್ವಿಚಾರಕರುಗಳಿಗೆ ಬೆ. 8.50 ಕ್ಕೆ / ಮ. 1.50 ಕ್ಕೆ ಅವರುಗಳ ಕೊಠಡಿಗೆ ತಂದು ಕೊಡುತ್ತಾರೆ.<br>• ನಂತರ ಕೊಠಡಿ ಮೇಲ್ವಿಚಾರಕರು ಸೀಲ್ ಮಾಡಿರುವ ಪ್ರಶ್ನೆ ಪತ್ರಿಕಾ ಲಕೋಟೆಯನ್ನು ಅಭ್ಯರ್ಥಿಗಳಿಗೆ ತೋರಿಸಿ ಈ ರೀತಿ ಜೋರಾಗಿ ಹೇಳಬೇಕು. "ಪ್ರಶ್ನೆ ಪತ್ರಿಕೆಗಳನ್ನು ಸೀಲ್ ಮಾಡಿರುವ ಲಕೋಟೆಯಲ್ಲಿ ಇಡಲಾಗಿದೆ ಮತ್ತು ಲಕೋಟೆಯು ಒಡೆದಿರುವುದಿಲ್ಲ". ನಂತರ ಲಕೋಟೆಯ ಮೇಲೆ ಹಾಜರಿರುವ ಯಾರಾದರೂ ಇಬ್ಬರು ಅಭ್ಯರ್ಥಿಗಳಿಂದ ಸಹಿಯನ್ನು ಪಡೆಯುತ್ತಾರೆ.<br>ವಿ.ಸೂ.: ಪ್ರಶ್ನೆ ಪತ್ರಿಕಾ ಲಕೋಟೆಯನ್ನು ತೆರೆಯಲು ಕೊಠಡಿ ಮೇಲ್ವಿಚಾರಕರು ಮಾತ್ರ ಅಧಿಕಾರವನ್ನು ಹೊಂದಿರುತ್ತಾರೆ. ಕೊಠಡಿ ಮೇಲ್ವಿಚಾರಕರನ್ನು ಹೊರತುಪಡಿಸಿ ಬೇರೆ ಯಾವುದೇ ಅಧಿಕಾರಿ / ಸಿಬ್ಬಂದಿ ವರ್ಗ / ಉಪ ಮುಖ್ಯ ಪರೀಕ್ಷಾ ಅಧೀಕ್ಷಕರು / ಪ್ರಶ್ನೆ ಪತ್ರಿಕಾ ಪಾಲಕರು / ಅಧ್ಯಕ್ಷರು / ಕಾರ್ಯದರ್ಶಿ / ಆಡಳಿತಾಧಿಕಾರಿ ಮುಂತಾದವರುಗಳು ಪ್ರಶ್ನೆ ಪತ್ರಿಕಾ ಲಕೋಟೆಯನ್ನು ತೆರೆಯಲು ಅಧಿಕಾರವನ್ನು ಹೊಂದಿರುವುದಿಲ್ಲ.<br>• ಬೆ. 8.55 / ಮ. 1.55 ಕ್ಕೆ ಕೊಠಡಿ ಮೇಲ್ವಿಚಾರಕರು ಲಕೋಟೆಯನ್ನು ತೆರೆದು ಕೊಠಡಿಯಲ್ಲಿರುವ ಅಭ್ಯರ್ಥಿಗಳಿಗೆ ಪ್ರಶ್ನೆ ಪತ್ರಿಕೆಯನ್ನು ಸೂಕ್ತ ರೀತಿಯಲ್ಲಿ ವಿತರಿಸುತ್ತಾರೆ.<br>• ಅಭ್ಯರ್ಥಿಗಳು ಪ್ರಶ್ನೆಪತ್ರಿಕೆಯ ವರ್ಷನ್ ಕೋಡ್ ಅನ್ನು ಬರೆದು ಅದಕ್ಕೆ ಸಂಬಂಧಿಸಿದ ವೃತ್ತಗಳನ್ನು ತುಂಬಬೇಕು. ನಂತರ ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯ "ವರ್ಷನ್ ಕೋಡ್ / ಕ್ರಮ ಸಂಖ್ಯೆ" ಯನ್ನು ನಾಮಿನಲ್ ರೋಲ್‌ನಲ್ಲಿ ಬರೆಯಬೇಕು.<br>• ಮೂರನೇ ಬೆಲ್ ಆಗುವವರೆಗೂ ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯ ಕಿರುಪುಸ್ತಕವನ್ನು ನೋಡಲು ಅಥವಾ ಓ.ಎಂ.ಆರ್ ಉತ್ತರ ಪತ್ರಿಕೆಯಲ್ಲಿ ಉತ್ತರಿಸುವುದಕ್ಕೆ ಅವಕಾಶ ಕೊಡಲಾಗುವುದಿಲ್ಲ.<br>• ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳ ಸಹಿಯನ್ನು ನಾಮಿನಲ್ ರೋಲ್ ನಲ್ಲಿ ಪಡೆದು ಮುದ್ರಿತವಾಗಿರುವ ಸಹಿಯನ್ನು ತಾಳೆ ಮಾಡುತ್ತಾರೆ. |
| 03 | ಮೂರನೇ ಬೆಲ್ | ಬೆ. 9.00 | ಮ. 2.00 | • ಅಭ್ಯರ್ಥಿಗಳು ಪ್ರಶ್ನೆ ಪತ್ರಿಕೆಯ ಕಿರು ಪುಸ್ತಕವನ್ನು ತೆರೆದು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಉತ್ತರಿಸಲು ಅವಕಾಶ ಕೊಡಲಾಗುವುದು.<br>• ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಉತ್ತರಿಸಲು ಪ್ರಾರಂಭಿಸುವ ಮೊದಲು, ಪ್ರಶ್ನೆ ಪತ್ರಿಕೆಯ ಬಲಭಾಗದಲ್ಲಿರುವ ಸೀಲ್ ತೆಗೆದು ಈ ಪ್ರಶ್ನೆ ಪತ್ರಿಕೆಯಲ್ಲಿ ಯಾವುದೇ ಪುಟಗಳು ಮುದ್ರಿತವಾಗಿಲ್ಲದೇ ಇರುವುದು ಕಂಡು ಬಂದಲ್ಲಿ ಅಥವಾ ಹರಿದು ಹೋಗಿದ್ದಲ್ಲಿ ಅಥವಾ ಯಾವುದೇ ಐಟಂಗಳು / ಪ್ರಶ್ನೆಗಳು ಬಿಟ್ಟುಹೋಗಿದೆಯೇ ಎಂಬುದನ್ನು ಖಚಿತಪಡಿಸಿಕೊಂಡು, ಈ ರೀತಿ ಆಗಿದ್ದರೆ ಕೂಡಲೇ ಕೊಠಡಿ ಮೇಲ್ವಿಚಾರಕರಿಂದ ಪ್ರಶ್ನೆಪತ್ರಿಕೆಯನ್ನು ಬದಲಾಯಿಸಿಕೊಳ್ಳಿ.<br>• ಈ ಬೆಲ್ ಅಂದರೆ ಬೆ. 9.00 / ಮ. 2.00 ಆದ ನಂತರ ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯನ್ನು ಪ್ರವೇಶಿಸಲು ಅಥವಾ ಪರೀಕ್ಷೆ ಮುಗಿಯುವವರೆಗೂ ಪರೀಕ್ಷಾ ಕೊಠಡಿಯಿಂದ ಹೊರ ಹೋಗಲು ಅವಕಾಶವಿರುವುದಿಲ್ಲ. |
| 04 | ನಾಲ್ಕನೇ ಬೆಲ್ | ಬೆ. 10.00 | ಮ. 3.00 | • ಮೊದಲನೆಯ ಎಚ್ಚರಿಕೆ ಬೆಲ್ – ಪರೀಕ್ಷೆಯ ಒಂದು ಗಂಟೆಯ ಅವಧಿ ಮುಗಿದಿರುವುದಕ್ಕಾಗಿ. |
| 05 | ಐದನೇ ಬೆಲ್ | ಬೆ. 11.00 | ಮ. 4.00 | • ಎರಡನೆಯ ಎಚ್ಚರಿಕೆ ಬೆಲ್ – ಪರೀಕ್ಷೆಯ ಎರಡು ಗಂಟೆಯ ಅವಧಿ ಮುಗಿದಿರುವುದಕ್ಕಾಗಿ. |
| 06 | ಆರನೇ ಬೆಲ್ | ಬೆ. 11.55 | ಸಂ. 4.55 | • ಕೊನೆಯ ಎಚ್ಚರಿಕೆಯ ಬೆಲ್– ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಗೆ ಪರೀಕ್ಷೆ ಮುಗಿಯಲು ಕೇವಲ ಐದು ನಿಮಿಷಗಳು ಬಾಕಿ ಉಳಿದಿವೆ ಎಂದು ತಿಳಿಸುತ್ತಾರೆ. |
| 07 | ಏಳನೇ ಹಾಗೂ ಕೊನೆಯ ಬೆಲ್ | ಮ. 12.00 | ಸಂ. 5.00 | • ಪರೀಕ್ಷೆ ಮುಕ್ತಾಯ. ಅಭ್ಯರ್ಥಿಗಳು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಉತ್ತರಿಸುವುದನ್ನು ನಿಲ್ಲಿಸುವುದು.<br>• ಈ ಬೆಲ್ ಆದ ತಕ್ಷಣ ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ಉತ್ತರಿಸುವುದನ್ನು ನಿಲ್ಲಿಸಿದ್ದಾರೆ ಎಂದು ಖಾತ್ರಿಮಾಡಿಕೊಳ್ಳಬೇಕು. ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಗೆ ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ತಮ್ಮ ಸಹಿ ಮಾಡಲು ಸೂಚಿಸಬೇಕು.<br>• ಅಭ್ಯರ್ಥಿಗಳು ಓ.ಎಂ.ಆರ್. ಉತ್ತರ ಪತ್ರಿಕೆಯನ್ನು ಯಥಾಸ್ಥಿತಿಯಲ್ಲಿ ಕೊಠಡಿ ಮೇಲ್ವಿಚಾರಕರಿಗೆ ನೀಡುವ ಮೊದಲು ಓ.ಎಂ.ಆರ್. ಉತ್ತರ ಪತ್ರಿಕೆಯಲ್ಲಿ ತಮ್ಮ ಸಹಿ ಮಾಡಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳಿ. ಕೊಠಡಿ ಮೇಲ್ವಿಚಾರಕರು ಅಭ್ಯರ್ಥಿಗಳಿಂದ ಓ.ಎಂ.ಆರ್. ಉತ್ತರ ಪತ್ರಿಕೆಯನ್ನು ಪಡೆಯುವುದು.<br>• ಕೊಠಡಿ ಮೇಲ್ವಿಚಾರಕರು ಓ.ಎಂ.ಆರ್. ಉತ್ತರ ಪತ್ರಿಕೆಯ ಮೇಲ್ಭಾಗದ ಹಾಳೆಯನ್ನು (ಕಚೇರಿ ಪ್ರತಿ) ನಿಧಾನವಾಗಿ ತೆಗೆದು ತಮ್ಮೊಡನೆ ಇಟ್ಟುಕೊಳ್ಳಬೇಕು.<br>• ಕೊಠಡಿ ಮೇಲ್ವಿಚಾರಕರು ಓ.ಎಂ.ಆರ್. ಉತ್ತರ ಪತ್ರಿಕೆಯ ಕೆಳಭಾಗದ ಹಾಳೆಯನ್ನು (ಅಭ್ಯರ್ಥಿಯ ಪ್ರತಿ) ಸಂಬಂಧಿಸಿದ ಅಭ್ಯರ್ಥಿಗಳಿಗೆ ಪ್ರಶ್ನೆ ಪತ್ರಿಕೆಯ ಜೊತೆಯಲ್ಲಿ ಹಿಂದಿರುಗಿಸಬೇಕು.<br>ಮುಖ್ಯವಾದುದು: ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯಿಂದ ಹೊರ ಹೋಗುವುದಕ್ಕೆ ಮೊದಲು ಓ.ಎಂ.ಆರ್ ಉತ್ತರ ಪತ್ರಿಕೆಯನ್ನು ಅಭ್ಯರ್ಥಿಗಳಿಂದ ಪಡೆಯಲಾಗಿದೆಯೇ ಎಂದು ಖಾತ್ರಿ ಮಾಡಿಕೊಳ್ಳಬೇಕು. |

ಗಮನಿಸಿ: ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯಲ್ಲಿ ಈ ಕೆಳಕಂಡ ರೀತಿಯ ತಪ್ಪುಗಳನ್ನು ಎಸಗಿದರೆ ಅಂತಹ ಅಭ್ಯರ್ಥಿಗಳ ವಿರುದ್ಧ ಶಿಸ್ತು ಕ್ರಮ ಹಾಗು ಅಪರಾಧ ಮೊಕದ್ದಮೆಯನ್ನು ಹೂಡಲಾಗುವುದು:

- ಗಲಾಟೆ ಮಾಡಿದರೆ / ನಿಶ್ಯಬ್ದತೆಯನ್ನು ಕಾಪಾಡದಿದ್ದರೆ; ಪರೀಕ್ಷಾ ಸಮಯದಲ್ಲಿ ವಿಷಯಕ್ಕೆ ಸಂಬಂಧಿಸಿದ ಪುಸ್ತಕ, ಚೀಟಿ ಇತ್ಯಾದಿಗಳನ್ನು ಬಳಸಿದರೆ;
- ಬೇರೆ ಅಭ್ಯರ್ಥಿಗಳ ಜೊತೆ ಮಾತನಾಡುವುದು ಅಥವಾ ಸಂಜ್ಞೆ ಮಾಡುವುದು; ಅಭ್ಯರ್ಥಿಯು ಬೇರೆ ಅಭ್ಯರ್ಥಿಗಳ ಉತ್ತರ ಪತ್ರಿಕೆಯಿಂದ ಅಥವಾ ಇನ್ನಾವುದೇ ಮೂಲಗಳಿಂದ ನಕಲು ಮಾಡುತ್ತಿದ್ದರೆ; ಅಭ್ಯರ್ಥಿಯು ತನ್ನ ಉತ್ತರ ಪತ್ರಿಕೆ ಬೇರೆ ಕಡೆ ವರ್ಗಾಯಿಸಿದರೆ; ಬದಲಿ ಅಭ್ಯರ್ಥಿಯಾಗಿದ್ದರೆ;
- ಪರೀಕ್ಷಾ ಅವಧಿಯಲ್ಲಿ ಅಥವಾ ಪರೀಕ್ಷೆಯ ನಂತರ ಉತ್ತರ ಪತ್ರಿಕೆಯನ್ನು ಪರೀಕ್ಷಾ ಕೊಠಡಿಯಿಂದ ಹೊರಗಡೆ ತೆಗೆದುಕೊಂಡು ಹೋದಲ್ಲಿ; ಉತ್ತರ ಪತ್ರಿಕೆಯನ್ನು ಹರಿದು ಹಾಕುವುದು ಅಥವಾ ಇನ್ನಾವುದೇ ಪರೀಕ್ಷಾ ಅವ್ಯವಹಾರಗಳು ಕಂಡು ಬಂದಲ್ಲಿ.

ಸಹಿ/–
ಕಾರ್ಯನಿರ್ವಾಹಕ ನಿರ್ದೇಶಕರು.